ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:502 (506)
ಸದಸ್ಯರ ಹೆಸರು	: ಡಾ;ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	: 21.02.2022
ಉತ್ತರಿಸಬೇಕಾದ ಸಚಿವರು	: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಪ್ರಶ್ನೆ	ಉತ್ತರ
ಅ) 1987ರ ರಿಂದ 1995 ರವರೆಗಿನ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಬಗ್ಗೆ ಆದೇಶವಾಗಿದ್ದು ಯಾವಾಗ; ಆ ಆದೇಶದಂತೆ ಎಲ್ಲಾ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲಾಗಿದೆಯೇ:	ಸರ್ಕಾರದ ಆದೇಶ ಸಂಖ್ಯೆ: ಇಡಿ 343 ಪಿ.ಎಂ.ಸಿ 2008, ದಿನಾಂಕ:02.06.2011, ಸರ್ಕಾರದ ಆದೇಶ ಸಂಖ್ಯೆ: ಇಡಿ 63 ಟಿಪಿಯು 2003, ದಿನಾಂಕ: 07-05-2007, ಸರ್ಕಾರದ ಆದೇಶ ಸಂಖ್ಯೆ: ಇಡಿ 59 ಟಿಪಿಯು 2006, ದಿನಾಂಕ: 06-10-2007 ಮತ್ತು ಸರ್ಕಾರದ ಆದೇಶ ಸಂಖ್ಯೆ: ಇಡಿ 217 ಪಿಎಂಸಿ 2008, ದಿನಾಂಕ: 08-09-2008 ರಲ್ಲಿ ಆದೇಶಿಸಲಾದಂತೆ 1987 ರಿಂದ 1995 ರವರೆಗಿನ ಅನುದಾನ ರಹಿತವಾಗಿ ಕನ್ನಡ ಮಾಧ್ಯಮದಲ್ಲಿ ಪ್ರಾರಂಭಿಸಿ ವಿಚ್ಛಿನತೆ ಇಲ್ಲದೇ ನಡೆದಿರುವ ಶಾಲೆಗಳನ್ನು ಆಡಳಿತ ಮಂಡಳಿಗಳು ವೇತನಾನುದಾನಕ್ಕೆ ಒಳಪಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಕೆಯಾಗಿರುವಂತಹ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ವೇತನಾನುದಾನಕ್ಕೆ ಒಳಪಡಿಸಲಾಗುತ್ತಿದೆ.
ಆ) ಈ ಅವಧಿಯಲ್ಲಿ ಪ್ರಾರಂಭಗೊಂಡು	ದಿನಾಂಕ : 01.06.1987 ರಿಂದ 1994-95ನೇ

ಅನುದಾನಕ್ಕೆ ಒಳಪಡಿಸಲು ಬಾಕಿ ಇರುವ ಶಾಲಾ ಕಾಲೇಜುಗಳನ್ನು ಯಾವ ಕಾರಣಕ್ಕಾಗಿ ತಡೆಹಿಡಿಯಲಾಗಿದೆ ಮತ್ತು ಯಾವಾಗ ಅನುದಾನಕ್ಕೆ ಒಳಪಡಿಸಲಾಗುವುದು:	ಸಾಲಿನಲ್ಲಿ ಪ್ರಾರಂಭಿಸಿ ಸತತವಾಗಿ ನಡೆಯುತ್ತಿರುವ ರಾಜ್ಯದಲ್ಲಿನ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪೈಕಿ ಸರ್ಕಾರವು ವಿಧಿಸಿರುವ ಮಾನದಂಡಗಳನ್ನು ಪೈರೈಸದೆ ಇರುವಂತಹ ಮತ್ತು ನಿಗಧಿತ ಕಾರ್ಯಭಾರ ಹೊಂದಿಲ್ಲದ, ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರು ನಿಗಧಿತ ವಿದ್ಯಾರ್ಹತೆ ಹೊಂದಿರದ ಪ್ರಯುಕ್ತ ಒಟ್ಟು 85 ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಅವಕಾಶವಿರುವುದಿಲ್ಲ. ಮುಂದುವರೆದು, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020 ದಿನಾಂಕ:10-06-2020ರಂತೆ ಆರ್ಥಿಕ ಮಿತವ್ಯಯದ ಆದೇಶ ಜಾರಿಯಲ್ಲಿರುತ್ತದೆ.
ಇ) 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ಸಮಸ್ಯೆಗಳೇನು: ಯಾವ ಕಾರಣಕ್ಕಾಗಿ ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯು ನಿಧಾನಗತಿಯಲ್ಲಿ ಸಾಗುತ್ತಿದೆ: ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು: ಯಾವ ಕಾಲಮಿತಿಯಲ್ಲಿ ಅನುದಾನಕ್ಕೆ ಒಳಪಡಿಸಲಾಗುವುದು?	1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು /

	ಉಪನ್ಯಾಸಕರುಗಳು / ಬೋಧಕೇತರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಪಡೆಯಲು ಸೂಚಿಸಿದ್ದು, ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ.

ಇಡಿ 53 ಪಿಎಂಸಿ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.